# ದೇಶಾದ್ಯಂತ ಎನ್‌ಆರ್‌ಸಿ ವಿಸ್ತರಣೆ?

ಉದಯವಾಣಿ 18/7/19

[illegible] ಯಲ್ಲಿರುವ ಅಕ್ರಮ ನುಸುಳುಕೋರರನ್ನು ಕೇಂದ್ರ ಗುರುತಿಸಿ, ಗಡಿಪಾರು ಮಾಡಲಿದೆ. ಆದಕ್ಕಾಗಿ ರಾಷ್ಟ್ರಾದ್ಯಂತ ರಾಷ್ಟ್ರೀಯ ಪೌರತ್ವ ನೋಂದಣಿ (ಎನ್‌ಆರ್‌ಸಿ) ವಿಸ್ತರಿಸಲು ಬದ್ಧವಾಗಿದ್ದೇವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜ್ಯಸಭೆಯಲ್ಲಿ ತಿಳಿಸಿದ್ದಾರೆ.

ಸಮಾಜವಾದಿ ಪಕ್ಷದ ಜಾವೇದ್ ಅಲಿ ಖಾನ್ ಎನ್‌ಆರ್‌ಸಿಯನ್ನು ಅಸ್ಸಾಂ ಹೊರತಾಗಿ ಉಳಿದ ರಾಜ್ಯಗಳಲ್ಲಿಯೂ ಜಾರಿಗೊಳಿಸಲಾಗುತ್ತದೆಯೇ ಎಂಬ ಪ್ರಶ್ನೆಗೆ ಅವರು ಉತ್ತರಿಸುತ್ತಿದ್ದರು. 'ಅಸ್ಸಾಂ ಒಪ್ಪಂದದಂತೆಯೇ ಎನ್‌ಆರ್‌ಸಿ ಇದೆ. ಅದು ಬಿಜೆಪಿಯ ಪ್ರಣಾಳಿಕೆಯಲ್ಲಿಯೂ ಇದೆ. ಅಂತಾರಾಷ್ಟ್ರೀಯ ನಿಯಮಗಳಿಗೆ ಅನ್ವಯವಾಗಿ ನುಸುಳುಕೋರರನ್ನು ಗಡಿಪಾರು ಮಾಡಲಾಗುತ್ತದೆ' ಎಂದಿದ್ದಾರೆ.

**ಶಾಶ್ವತ ಮುಂದುವರಿಕೆ ಇಲ್ಲ:** ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ (ಮನರೇಗಾ)ಯನ್ನು ಶಾಶ್ವತವಾಗಿ ಮುಂದುವರಿಸುವ ಇರಾದೆ ಸರ್ಕಾರಕ್ಕೆ ಇಲ್ಲ. ಅದು ಕೇವಲ ಬಡವರಿಗಾಗಿ ಇರುವ ಯೋಜನೆಯಾಗಿದೆ. ಮೋದಿ ಸರ್ಕಾರದ ವಿಸ್ತೃತ ಗುರಿಯೇ ಬಡತನ ನಿವಾರಣೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ನರೇಂದ್ರ ಸಿಂಗ್ ತೋಮರ್ . ಲೋಕಸಭೆಗೆ ಮಾಹಿತಿ ನೀಡಿದ್ದಾರೆ.

**ಅಧಿಕಾರಿಗಳ ವಜಾ:** 5 ವರ್ಷಗಳ ಅವಧಿಯಲ್ಲಿ ಗೃಹ ಖಾತೆಯ ವ್ಯಾಪ್ತಿಯಲ್ಲಿ 1,083 ಅಧಿಕಾರಿಗಳನ್ನು ವಜಾ ಮಾಡಲಾಗಿದೆ. ಅಧಿಕಾರಿಗಳಲ್ಲಿ ಸರಿಯಾದ ರೀತಿಯಲ್ಲಿ ಕಾರ್ಯತತ್ಪರತೆ ತೋರದೇ ಇರುವುದು ಮತ್ತು ಪ್ರಾಮಾಣಿಕತೆಯಿಂದ ಇಲ್ಲದೇ ಇರುವ ಕಾರಣಗಳಿಗಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸಚಿವ ನಿತ್ಯಾನಂದ ರಾಯ್ ರಾಜ್ಯಸಭೆ ಯಲ್ಲಿ ತಿಳಿಸಿದ್ದಾರೆ.

## ಎನ್‌ಐಎ ವಿಧೇಯಕ ಅಂಗೀಕಾರ

ಲೋಕಸಭೆಯಲ್ಲಿ ಅಂಗೀಕಾರ ಪಡೆದಿರುವ ಎನ್‌ಐಎ ವಿಧೇಯಕ ರಾಜ್ಯಸಭೆಯಲ್ಲಿಯೂ ಬುಧವಾರ ಅಂಗೀಕಾರಗೊಂಡಿದೆ. ಈ ಕುರಿತು ರಾಜ್ಯಸಭೆಯಲ್ಲಿ ದೀರ್ಘ ಚರ್ಚೆ ನಡೆಯಿತು. ರಾಜ್ಯಗಳ ಜತೆಗೆ ಸಹಕಾರದಿಂದ ಭಯೋತ್ಪಾದನೆಯನ್ನು ನಿಗ್ರಹಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ರಾಜ್ಯಗಳಿಗೆ ಇರುವ ಹಕ್ಕು ಕಸಿದುಕೊಳ್ಳಬಾರದು ಎಂದು ಎಂದು ಪ್ರತಿಪಕ್ಷಗಳು ಕೇಂದ್ರವನ್ನು ಒತ್ತಾಯಿಸಿದವು. ಕಾಂಗ್ರೆಸ್ ಸೇರಿದಂತೆ ಪ್ರಮುಖ ಪಕ್ಷಗಳ ಸದಸ್ಯರು ಚರ್ಚೆಯಲ್ಲಿ ಭಾಗವಹಿಸಿದ್ದವು.

# ಎನ್‌ಎಂಸಿ ವಿಧೇಯಕಕ್ಕೆ ಕೇಂದ್ರ ಸಂಪುಟ ಒಪ್ಪಿಗೆ

**ನವದೆಹಲಿ:** ಬಹು ನಿರೀಕ್ಷಿತ ರಾಷ್ಟ್ರೀಯ ವೈದ್ಯಕೀಯ ಆಯೋಗ ವಿಧೇಯಕಕ್ಕೆ ಪ್ರಧಾನಿ ನರೇಂದ್ರ ನೇತೃತ್ವದ ಸಂಪುಟ ಸಭೆ ಬುಧವಾರ ಅನುಮೋದನೆ ನೀಡಿದೆ. ಹಾಲಿ ನಡೆಯುವ ಮುಂಗಾರು ಅಧಿವೇಶನದಲ್ಲಿಯೇ ಅದನ್ನು ಮಂಡಿಸಿ ಅನುಮೋದನೆ ಪಡೆದುಕೊಳ್ಳುವ ಇರಾದೆಯಲ್ಲಿದೆ ಸರ್ಕಾರ.

ತಿದ್ದುಪಡಿ ವಿಧೇಯಕದಲ್ಲಿ ಎಂಬಿಬಿಎಸ್‌ನ ಅಂತಿಮ ವರ್ಷದ ಪರೀಕ್ಷೆಯನ್ನೇ ವೈದ್ಯ ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶ ಪರೀಕ್ಷೆಗಳನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸೂಚಿಸಲಾಗಿದೆ. ಜತೆಗೆ ಹಾಲಿ ಇರುವ ಭಾರತೀಯ ವೈದ್ಯಕೀಯ ಮಂಡಳಿ ಸ್ಥಾನದಲ್ಲಿ ರಾಷ್ಟ್ರೀಯ ವೈದ್ಯಕೀಯ ಆಯೋಗ ರಚನೆಯಾಗಲಿದೆ. ವೈದ್ಯ ಪ್ರವೇಶ ಪರೀಕ್ಷೆ ಮತ್ತು ಅಂತಿಮ ಹಂತದ ಪರೀಕ್ಷೆ ಏಮ್ಸ್, ರಾಷ್ಟ್ರೀಯ ಮಟ್ಟದ ಶಿಕ್ಷಣ ಸಂಸ್ಥೆಗಳು ಸೇರಿದಂತೆ ಎಲ್ಲಾ ಪ್ರಮುಖ ಸಂಸ್ಥೆಗಳಿಗೂ ಅನ್ವಯವಾಗಲಿದೆ. ಇದೇ ವೇಳೆ ದಿವಾಳಿ ಕಾಯ್ದೆಗೆ ಏಳು ತಿದ್ದುಪಡಿಗೆ ಸಂಪುಟ ಸಭೆ ಸಮ್ಮತಿ ಸೂಚಿಸಿದೆ. ಇದರಿಂದಾಗಿ ಕಾರ್ಪೊರೇಟ್ ಕ್ಷೇತ್ರದ ವಿವಾದಗಳನ್ನು ಸುಲಲಿತವಾಗಿ ಇತ್ಯರ್ಥಗೊಳಿಸಲು ನೆರವಾಗಲಿದೆ. ಹದಿನೈದನೇ ಹಣಕಾಸು ಆಯೋಗದ ಅವಧಿಯಲ್ಲಿ ನ.30ರ ವರೆಗೆ ವಿಸ್ತರಿಸುವ ಬಗ್ಗೆಯೂ ಸಂಪುಟ ತೀರ್ಮಾನ ಕೈಗೊಂಡಿದ್ದು, ಕಂಪನಿ ಕಾಯ್ದೆಗೆ ತಿದ್ದುಪಡಿ ತರುವ ವಿಧೇಯಕಕ್ಕೂ ಅಂಗೀಕಾರ ನೀಡಿದೆ.